ನ್ಯಾಯಮೂರ್ತಿ ಸೋಮಶೇಖರ್ ಆಯೋಗದ ವರದಿಯನ್ನು ತಿರಸ್ಕರಿಸುವುದು

214 (267) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನ್ಯಾಯಮೂರ್ತಿ ಸೋಮಶೇಖರ್ ಆಯೋಗವು ಚರ್ಚ್‌ಗಳ ಮೇಲೆ ನಡೆದ ದಾಳಿ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಈ ವರದಿಯನ್ನು ಸಲ್ಲಿಸಿತು;

ಇ) ಕೆಲವು ಚರ್ಚ್‌ಗಳ ಮೇಲೆ ನಡೆದ ದಾಳಿಗೆ ಯಾ ಸಂಘಟನೆ ಅಥವಾ ವ್ಯಕ್ತಿಗಳು ಕಾರಣರಾಗಿದ್ದಾರೆಂಬುದನ್ನು ಈ ವರದಿಯಲ್ಲಿ ತಿಳಿಸಲಾಗಿದೆಯೇ;

ಈ) ಈ ಆಯೋಗವು ಮಧ್ಯಂತರ ವರದಿಯನ್ನು ಯಾವಾಗ ಸಲ್ಲಿಸಿತು;

ಉ) ಮಧ್ಯಂತರ ವರದಿ ಬಂದ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

ಊ) ಈ ಆಯೋಗಕ್ಕೆ ತಗಲಿದ ವೆಚ್ಚವೆಷ್ಟು;

ಋ) ಈ ವರದಿಯನ್ನು ಸರ್ಕಾರ ತಿರಸ್ಕರಿಸಿದೆಯೇ;

ಎ) ಚರ್ಚ್ ದಾಳಿಗೆ ತಪ್ಪಿತಸ್ಥರನ್ನು ಕಂಡುಹಿಡಿಯಲು ಈ ಪ್ರಕರಣವನ್ನು ಸಿ.ಬಿ.ಐ.ಗೆ ವಹಿಸಲು ಸರ್ಕಾರ ನಿರ್ಧರಿಸಿದೆಯೇ?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು.

ಆ) ದಿನಾಂಕ: 28.1.2011ರಂದು ಮಾನ್ಯ ಆಯೋಗವು ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿತು.

ಇ) ವರದಿಯು ಗೌಪ್ಯವಾಗಿದ್ದು, ಸಚಿವ ಸಂಪುಟದ ಅನುಮೋದನೆಯ ನಂತರವಷ್ಟೇ ನಿರ್ಧಾರವಾಗುತ್ತದೆ.

ಈ) ದಿನಾಂಕ: 1.2.2010ರಂದು ಮಾನ್ಯ ಆಯೋಗವು ತನ್ನ ಮಧ್ಯಂತರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿತು.

ಉ) ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಊ) ಇಲ್ಲಿಯವರೆಗೆ ₹3,30,14,200ಗಳ ಅನುದಾನ ಬಿಡುಗಡೆಯಾಗಿರುತ್ತದೆ.

ಋ) ಇಲ್ಲ.

ಎ) ಇಲ್ಲ.